**All India Radio: Bangalore**
**National Bulletin In Kannada**
**17.09.2026 07.35 a.m.**

**<><><><>**

ಮುಖ್ಯಾಂಶಗಳು

1. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದ ದೆಹಲಿಯಲ್ಲಿಂದು ಸೆಮಿಕಾನ್ ಇಂಡಿಯಾ ೨೦೨೬ ಉದ್ಘಾಟನೆ
2. ಪ್ರಧಾನಿ ಅವರು ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಅಂಗವಾಗಿ ಇಂದಿನಿಂದ ಒಂದು ತಿಂಗಳ ಕಾಲ ದೇಶಾದ್ಯಂತ 'ಸೇವಾ ಸಂಕಲ್ಪ ಅಭಿಯಾನ'ಕ್ಕೆ ಚಾಲನೆ
3. ಗುಜರಾತ್‌ನ ಗಾಂಧಿನಗರದಲ್ಲಿಂದು ಆಳ ಸಮುದ್ರ ಮೀನುಗಾರಿಕೆಗೆ ಉತ್ತೇಜನ ಕುರಿತ ರಾಷ್ಟ್ರೀಯ ಕಾರ್ಯಾಗಾರ ಆರಂಭ
4. ಅಂತಾರಾಷ್ಟೀಯ ಟಿ-೨೦ ಪುರುಷರ ಕ್ರಿಕೆಟ್ ; ಅಫ್ಘಾನಿಸ್ತಾನ ವಿರುದ್ಧದ ಮೂರು ಪಂದ್ಯಗಳ ಸರಣಿಯ ಅಂತಿಮ ಪಂದ್ಯದಲ್ಲಿ ಭಾರತ ಸೆಣಸು

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದ ನವದೆಹಲಿಯ ಯಶೋಭೂಮಿಯಲ್ಲಿ ಸೆಮಿಕಾನ್ ಇಂಡಿಯಾ ೨೦೨೬ ಅನ್ನು ಉದ್ಘಾಟಿಸಲಿದ್ದಾರೆ. ಈ ಸಂದರ್ಭದಲ್ಲಿ ಅವರು ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಇಂದಿನಿಂದ ಮೂರು ದಿನಗಳ ಕಾಲ ನಡೆಯಲಿರುವ ಸಮ್ಮೇಳನ ಮತ್ತು ಪ್ರದರ್ಶನವನ್ನು 'ಸಿಲಿಕಾನ್ ಟು ಸಿಸ್ಟಮ್ಸ್: ಬಿಲ್ಡಿಂಗ್ ದಿ ಎಕೋಸಿಸ್ಟಮ್' ಎಂಬ ವಿಷಯದ ಮೇಲೆ ಆಯೋಜಿಸಲಾಗಿದೆ. ಇದು ಜಾಗತಿಕ ಮತ್ತು ಭಾರತೀಯ ಕಂಪನಿಗಳು, ನೀತಿ ನಿರೂಪಕರು, ಹೂಡಿಕೆದಾರರು, ಸಂಶೋಧಕರು, ಸ್ಟಾರ್ಟ್ ಅಪ್‌ಗಳು, ಶೈಕ್ಷಣಿಕ ಸಂಸ್ಥೆಗಳು ಮತ್ತು ಸೆಮಿಕಂಡಕ್ಟರ್ ಮತ್ತು ಎಲೆಕ್ಟ್ರಾನಿಕ್ಸ್ ಮೌಲ್ಯ ಸರಣಿಯಾದ್ಯಂತದ ವಿದ್ಯಾರ್ಥಿಗಳನ್ನು ಒಗ್ಗೂಡಿಸುತ್ತದೆ. ಈ ಸಮ್ಮೇಳನವು ಭಾರತದಲ್ಲಿ ಸಹಯೋಗ, ಹೂಡಿಕೆ, ನಾವೀನ್ಯತೆ ಮತ್ತು ಪ್ರತಿಭೆಗಳ ಪೋಷಣೆಯನ್ನು ಮುಂದುವರಿಸುವುದರ ಮೇಲೆ ಕೇಂದ್ರೀಕರಿಸುತ್ತದೆ. ಸಮಾನಾಂತರ ಗೋಷ್ಠಿಗಳು ಪ್ರದರ್ಶನ ಉದ್ಯಮದಲ್ಲಿನ ಪ್ರಗತಿಗಳು, ಸಹಯೋಗ ಮತ್ತು ಜಂಟಿ ಉದ್ಯಮಗಳನ್ನು ಸುಗಮಗೊಳಿಸಲು ವಿನ್ಯಾಸಗೊಳಿಸಲಾದ ಆರು ದೇಶಗಳ ದುಂಡುಮೇಜಿನ ಸಭೆಗಳು, ಮಹಿಳಾ ನಾಯಕತ್ವದ ಕುರಿತಾದ ವೇದಿಕೆ, ಇತರ ಗೋಷ್ಠಿಗಳನ್ನು ಒಳಗೊಂಡಿರುತ್ತವೆ. ಸೆಮಿಕಾನ್ ಇಂಡಿಯಾ ೨೦೨೬ ಸಮಗ್ರ ಮೌಲ್ಯ-ಸರಣಿ ವಿಧಾನವನ್ನು ಅಳವಡಿಸಿಕೊಂಡಿದೆ. ಇದು ಸೆಮಿಕಂಡಕ್ಟರ್ ಸಾಮಗ್ರಿಗಳು, ಉಪಕರಣಗಳು ಮತ್ತು ಚಿಪ್ ವಿನ್ಯಾಸದಿಂದ ಫ್ಯಾಬ್ರಿಕೇಶನ್, ಸುಧಾರಿತ ಪ್ಯಾಕೇಜಿಂಗ್, ಎಲೆಕ್ಟ್ರಾನಿಕ್ಸ್ ಮತ್ತು ವ್ಯವಸ್ಥೆಗಳವರೆಗಿನ ಪಯಣವನ್ನು ಪ್ರದರ್ಶಿಸುತ್ತದೆ. ಹೊಸ 'ಮರಳಿನಿಂದ ಸಿಲಿಕಾನ್‌ಗೆ ವ್ಯವಸ್ಥೆಗಳು' ಮೌಲ್ಯ ಸರಣಿ ಅನುಭವವು ಸೆಮಿಕಂಡ್ಟಕರ್ ಪೂರಕ ವ್ಯವಸ್ಥೆಯಾದ್ಯಂತ ಈ ಪಯಣವನ್ನು ಪ್ರಸ್ತುತಪಡಿಸುತ್ತದೆ. ಸೆಮಿಕಾನ್ ಇಂಡಿಯಾ ೨೦೨೬ ರಲ್ಲಿ ೬೦೦ ಕ್ಕೂ ಅಧಿಕ ಕಂಪನಿಗಳು ಭಾಗವಹಿಸಲಿವೆ ಮತ್ತು ಸುಮಾರು ೫೦,೦೦೦ ಸಂದರ್ಶಕರನ್ನು ಆಕರ್ಷಿಸುವ ನಿರೀಕ್ಷೆಯಿದೆ, ೫೨ ದೇಶಗಳ

ಪ್ರತಿನಿಧಿಗಳು, ೪೦೦ ಕ್ಕೂ ಅಧಿಕ ಕಾರ್ಯನಿರ್ವಾಹಕರು ಮತ್ತು ೧೫೦ಕ್ಕೂ ಅಧಿಕ ಭಾಷಣಕಾರರು ಪಾಲ್ಗೊಳ್ಳಲಿದ್ದಾರೆ. ಪ್ರದರ್ಶನವು ಜಪಾನ್, ದಕ್ಷಿಣ ಕೊರಿಯಾ, ಮಲೇಷ್ಯಾ, ನೆದರ್‌ಲ್ಯಾಂಡ್ಸ್, ಸಿಂಗಾಪುರ ಮತ್ತು ಸ್ವೀಡನ್ ಅನ್ನು ಪ್ರತಿನಿಧಿಸುವ ಆರು ದೇಶಗಳ ಮಳಿಗೆಗಳು, ಜೊತೆಗೆ ೧೨ ರಾಜ್ಯ ಬೂತ್‌ಗಳು, ಸ್ಟಾರ್ಟ್‌ಅಪ್ ಪೆವಿಲಿಯನ್, ನಾವೀನ್ಯತೆ ಪ್ರದರ್ಶನ, ವಿದ್ಯಾರ್ಥಿ ಹ್ಯಾಕಥಾನ್ ಮತ್ತು ದುಡಿಯುವಪಡೆ ಅಭಿವೃದ್ಧಿ ಮಂಟಪವನ್ನು ಒಳಗೊಂಡಿರುತ್ತದೆ.

<><><><>

ಭಾರತದ ತಂತ್ರಜ್ಞಾನ ಭವಿಷ್ಯವನ್ನು ರೂಪಿಸುವಲ್ಲಿ ಸರ್ಕಾರ ಮತ್ತು ಸೆಮಿಕಂಡಕ್ಟರ್ ಉದ್ಯಮದ ನಡುವಿನ ನಿಕಟ ಸಹಯೋಗದ ಅಗತ್ಯತೆಯನ್ನು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಸೆಮಿಕಂಡಕ್ಟರ್ ವಲಯದ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳೊಂದಿಗೆ ನಡೆದ ದುಂಡುಮೇಜಿನ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು ಭಾರತದ ಪ್ರತಿಭೆ, ತಂತ್ರಜ್ಞಾನ ಅಳವಡಿಕೆ ಮತ್ತು ಬಲವಾದ ಮೂಲಸೌಕರ್ಯಗಳನ್ನು ಪ್ರಸ್ತಾಪಿಸಿದರು. ಕೌಶಲ್ಯ, ನಾವೀನ್ಯತೆ ಮತ್ತು ಎಐ ಮತ್ತು ಕ್ವಾಂಟಮ್ ಕಂಪ್ಯೂಟಿಂಗ್‌ನಂತಹ ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ಉದ್ಯಮದವರು ಹೆಚ್ಚಿನ ಪ್ರಮಾಣದಲ್ಲಿ ಭಾಗವಹಿಸಬೇಕೆಂದು ಕರೆ ನೀಡಿದರು. ಒಂದು ಕೋಟಿ ಜನರಿಗೆ ಕೃತಕ ಬುದ್ಧಿಮತ್ತೆ ತರಬೇತಿ ನೀಡುವ ಗುರಿಯನ್ನು ಉಲ್ಲೇಖಿಸಿದ ಅವರು, ಭಾರತದ ಪ್ರತಿಭಾ ಸಂಪನ್ಮೂಲ, ಜಾಗತಿಕ ಉದ್ಯಮ ನಾಯಕರ ಅನುಭವ ಮತ್ತು ಸಾಮರ್ಥ್ಯಗಳೊಂದಿಗೆ ಸೇರಿ ಗಮನಾರ್ಹ ಅವಕಾಶಗಳನ್ನು ಸೃಷ್ಟಿಸಬಹುದು ಎಂದು ಹೇಳಿದರು. ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ಆರಂಭಿಕ ನಾಯಕರಲ್ಲಿ ಭಾರತವೂ ಒಂದಾಗಬೇಕು. ಸೆಮಿಕಂಡಕ್ಟರ್ ವಲಯದಲ್ಲಿ ಆಗಿರುವ ಗಮನಾರ್ಹ ಪ್ರಗತಿಯನ್ನು ವಿವರಿಸಿದ ಅವರು, ತಾಂತ್ರಿಕ ಪ್ರಗತಿಗಳು ಮತ್ತು ಉದ್ಯಮದ ಅವಶ್ಯಕತೆಗಳಿಗೆ ಅನುಗುಣವಾಗಿ ನೀತಿಗಳು ವಿಕಸನಗೊಳ್ಳಬೇಕು. ಊಹಿಸಬಹುದಾದ ಮತ್ತು ಸ್ಪಂದಿಸುವ ನೀತಿ ಪರಿಸರಕ್ಕೆ ಸರ್ಕಾರದ ಬದ್ಧತೆಯನ್ನು ನರೇಂದ್ರ ಮೋದಿ ಅವರು ಪುನರುಚ್ಚರಿಸಿದರು.

<><><><>

ಇಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಜನ್ಮದಿನ ಮತ್ತು ಅವರು ಸಾರ್ವಜನಿಕ ಸೇವೆಯಲ್ಲಿ ೭೫ ವರ್ಷ ಪೂರ್ಣಗೊಳಿಸಿದ ಅಂಗವಾಗಿ, ಗುಜರಾತ್‌ನ ಅವರ ಹುಟ್ಟೂರು ವಡ್‌ನಗರದಲ್ಲಿ ಇಂದಿನಿಂದ ಒಂದು ತಿಂಗಳ ಕಾಲ ದೇಶಾದ್ಯಂತ ನಡೆಯುವ 'ಸೇವಾ ಸಂಕಲ್ಪ ಅಭಿಯಾನ'ಕ್ಕೆ ಚಾಲನೆ ನೀಡಲಾಗುವುದು. ಅದರ ಭಾಗವಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಅವರು ವಡ್‌ನಗರದಿಂದ ವಾರಣಾಸಿಯವರೆಗೆ ನಡೆಯುವ ಬೈಕ್ ರ‍್ಯಾಲಿಗೆ ಚಾಲನೆ ನೀಡಲಿದ್ದಾರೆ. ಅಲ್ಲದೆ, ಅವರು ಐತಿಹಾಸಿಕ ಶರ್ಮಿಷ್ಠಾ ಸರೋವರದಲ್ಲಿ ನಡೆಯಲಿರುವ ಭವ್ಯ 'ಮಹಾ ಆರತಿ'ಯಲ್ಲಿ ಪಾಲ್ಗೊಳ್ಳಲಿದ್ದಾರೆ; ಜತೆಗೆ ಗೃಹ ಸಚಿವ ಅಮಿತ್ ಶಾ ಅವರು ವಡ್‌ನಗರ ರೈಲು ನಿಲ್ದಾಣದಲ್ಲಿ ನಡೆಯುವ ಸ್ವಚ್ಛತಾ ಅಭಿಯಾನದ ನೇತೃತ್ವವನ್ನೂ ವಹಿಸಲಿದ್ದಾರೆ.

**ಧ್ವನಿ: ಅಪರ್ಣಾ ೩೨ ಸೆಕೆಂಡ್‌ಗಳು**

ಪ್ರಧಾನಿ ನರೇಂದ್ರ ಮೋದಿ ಅವರು ಪ್ರತಿನಿಧಿಸುವ ಲೋಕಸಭಾಕ್ಷೇತ್ರ ವಾರಣಾಸಿಯಲ್ಲಿ, ಅವರ ಜನ್ಮದಿನದ ಅಂಗವಾಗಿ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಕಾಶಿ ವಿಶ್ವನಾಥ ಧಾಮದಲ್ಲಿ ವಿಶೇಷ ಪ್ರಾರ್ಥನೆ ಮತ್ತು ರುದ್ರಾಭಿಷೇಕವನ್ನು ನೆರವೇರಿಸಲಾಗುತ್ತದೆ. ವಾರಣಾಸಿಯಿಂದ ವಡ್‌ನಗರದವರೆಗೆ 'ಸೇವಾ ಯಾತ್ರೆ' ಕೈಗೊಳ್ಳಲಿರುವ ೫೦೦ ಯುವ ಬೈಕ್ ಸವಾರರನ್ನು ಗೌರವಿಸಲಾಗುತ್ತದೆ. ಈ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತಿತರರು ಭಾಗವಹಿಸಲಿದ್ದಾರೆ.

<><><><>

ಭಾರತ ಸರ್ಕಾರದ ಮೀನುಗಾರಿಕೆ ಇಲಾಖೆಯು ಗುಜರಾತ್‌ನ ಗಾಂಧಿನಗರದಲ್ಲಿಂದು ಆಳ ಸಮುದ್ರ ಮೀನುಗಾರಿಕೆಗೆ ಉತ್ತೇಜನ ಮತ್ತು ಪ್ರವೇಶ ಪಾಸ್ ಮತ್ತು ಎಲ್‌ಒಎ ಹೊಂದಿರುವವರೊಂದಿಗೆ ಸಂವಹನದ ಕುರಿತ ರಾಷ್ಟ್ರೀಯ ಕಾರ್ಯಾಗಾರವನ್ನು ಆಯೋಜಿಸಿದೆ. ರಾಷ್ಟ್ರೀಯ ಕಾರ್ಯಾಗಾರದ ಗುರಿ ಹೆಚ್ಚಿನ ಮೌಲ್ಯದ ಮೀನುಗಾರಿಕೆ ಸಂಪನ್ಮೂಲಗಳನ್ನು ಬಳಸಿಕೊಳ್ಳಲು ಮೀನುಗಾರರನ್ನು ಪ್ರೋತ್ಸಾಹಿಸುವ ಮೂಲಕ ಆಳ ಸಮುದ್ರ ಮೀನುಗಾರಿಕೆ ಉತ್ತೇಜಿಸುವುದಾಗಿದೆ. ಜೊತೆಗೆ ತಳಮಟ್ಟದ ಸವಾಲುಗಳನ್ನು ಅರ್ಥಮಾಡಿಕೊಳ್ಳಲು ಮತ್ತು ವಲಯವನ್ನು ಮತ್ತಷ್ಟು ಬಲವರ್ಧನೆಗೊಳಿಸಲು ಪಾಲುದಾರರ ಸಲಹೆಗಳನ್ನು ಕ್ರೂಢೀಕರಿಸಲು ವೇದಿಕೆಯನ್ನು ಒದಗಿಸುತ್ತದೆ. ರಾಷ್ಟ್ರೀಯ ಕಾರ್ಯಾಗಾರವು ಕೇಂದ್ರ ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ಮತ್ತು ಪಂಚಾಯತ್ ರಾಜ್ ಸಚಿವ ರಾಜೀವ್ ರಂಜನ್ ಸಿಂಗ್; ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರಭಾಯಿ ಪಟೇಲ್, ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ಮತ್ತು ಪಂಚಾಯತ್ ರಾಜ್ ರಾಜ್ಯ ಸಚಿವ ಪ್ರೊ. ಎಸ್. ಪಿ. ಸಿಂಗ್ ಬಾಘೇಲ್ ಅವರ ಸಮಕ್ಷಮದಲ್ಲಿ ನಡೆಯಲಿದೆ. ಮೀನುಗಾರಿಕೆ ಇಲಾಖೆಯು ಮೀನುಗಾರಿಕೆ ರೈತ ಉತ್ಪಾದಕ ಸಂಸ್ಥೆಗಳು (ಎಫ್‌ಎಫ್‌ಪಿಒ) ಮತ್ತು ಮೀನುಗಾರಿಕೆ ಸಹಕಾರಿ ಸಂಘಗಳನ್ನು ಬಲವರ್ಧನೆಗೊಳಿಸಲು ವಿಶೇಷ ಒತ್ತು ನೀಡುವುದರ ಜೊತೆಗೆ ವಿವಿಧ ಉಪಕ್ರಮಗಳ ಮೂಲಕ ಮೀನುಗಾರಿಕೆ ಕ್ಷೇತ್ರದ ಡಿಜಿಟಲೀಕರಣದತ್ತ ಗಮನಹರಿಸಿದೆ.

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ಇಂದಿನಿಂದ ದೇಶಾದ್ಯಂತ ನಡೆಯಲಿರುವ ಸೇವಾ ಸಂಕಲ್ಪ ಅಭಿಯಾನದ ಭಾಗವಾಗಿ ಆಕಾಶವಾಣಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಪ್ರಸಾರ ಮಾಡುತ್ತದೆ. ಇಂದು ಅದರ ಅಂಗವಾಗಿ ಬಾಹ್ಯಾಕಾಶ ವಲಯದಲ್ಲಿ ಕೈಗೊಂಡ ಸುಧಾರಣೆಗಳ ಒಂದು ನೋಟ ಇಲ್ಲಿದೆ. ಅರ್ಧ ಶತಮಾನಗಳ ವರೆಗೆ ಬಾಹ್ಯಾಕಾಶವೆಂದರೆ ಭಾರತದಲ್ಲಿ ಕೇವಲ ಇಸ್ರೋ ಎಂದು ಮನೆ ಮಾತಾಗಿತ್ತು. ಆದರೆ ೨೦೨೦ರಲ್ಲಿ ಕೇಂದ್ರ ಸರ್ಕಾರ ಕೈಗೊಂಡ ಮಹತ್ವದ ಸುಧಾರಣೆಗಳ ಪರಿಣಾಮ ಖಾಸಗಿಯವರಿಗೂ ಬಾಹ್ಯಾಕಾಶ ವಲಯದಲ್ಲಿ ಮುಕ್ತ ಅವಕಾಶ ದೊರಕಿಸಿಕೊಡಲಾಯಿತು. ಖಾಸಗಿ ವಲಯದ ಬಾಹ್ಯಾಕಾಶ ಚಟುವಟಿಕೆಗಳನ್ನು ಉತ್ತೇಜಿಸಲು ಮತ್ತು ಬೆಂಬಲಿಸಲು ಇನ್ ಸ್ಪೇಸ್ ಎಂಬ ಸ್ವತಂತ್ರ ಸಂಸ್ಥೆಯನ್ನು ಹುಟ್ಟುಹಾಕಲಾಯಿತು. ಅನಂತರ ೨೦೨೩ರಲ್ಲಿ

ಭಾರತದ ಬಾಹ್ಯಾಕಾಶ ನೀತಿಯನ್ನು ಪ್ರಕಟಿಸಿ, ಉಪಗ್ರಹಗಳ ಉಡಾವಣೆ ಸೇರಿದಂತೆ ಎಲ್ಲ ಚಟುವಟಿಕೆಗಳನ್ನು ಖಾಸಗಿಯವರಿಗೆ ಮುಕ್ತಗೊಳಿಸಲಾಯಿತು.

<><><><>

ಅಂತಾರಾಷ್ಟ್ರೀಯ ಟಿ-೨೦ ಪುರುಷರ ಕ್ರಿಕೆಟ್‌ನಲ್ಲಿ ಅಫ್ಘಾನಿಸ್ತಾನ ವಿರುದ್ಧದ ಮೂರು ಪಂದ್ಯಗಳ ಸರಣಿಯ ಅಂತಿಮ ಪಂದ್ಯವನ್ನು ಭಾರತವು ಆಡಲಿದ್ದು, ಪಂದ್ಯವು ದೆಹಲಿಯ ಅರುಣ್‌ಜೆಟ್ಲಿ ಕ್ರೀಡಾಂಗಣದಲ್ಲಿ ಭಾರತೀಯ ಕಾಲಮಾನ ಇಂದು ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಭಾರತವು ಈಗಾಗಲೇ ಮೊದಲ ಎರಡು ಪಂದ್ಯಗಳಲ್ಲಿ ಭರ್ಜರಿ ಗೆಲುವು ಸಾಧಿಸುವ ಮೂಲಕ ಸರಣಿಯನ್ನು ತನ್ನದಾಗಿಸಿಕೊಂಡಿದೆ. ಮೊದಲ ಪಂದ್ಯದ ಗೆಲುವಿನಲ್ಲಿ ಅಭಿಷೇಕ್ ಶರ್ಮಾ ಉತ್ತಮ ಆರಂಭ ಒದಗಿಸಿಕೊಟ್ಟರೆ, ಎರಡನೇ ಪಂದ್ಯದಲ್ಲಿ ಸಂಜು ಸ್ಯಾಮ್ಸನ್ ಕೇವಲ ೨೨ ಎಸೆತಗಳಲ್ಲಿ ೫೭ ರನ್‌ಗಳಿಸಿ ಗೆಲುವನ್ನು ಖಚಿತಪಡಿಸಿದರು. ಜಸ್‌ಪ್ರೀತ್ ಬುಮ್ರಾ ಮತ್ತು ಅರ್ಷದೀಪ್ ಸಿಂಗ್ ಅವರ ಮರಳುವಿಕೆ ಹಾಗೂ ನಿತೀಶ್ ಕುಮಾರ್ ರೆಡ್ಡಿ ಅವರ ಪರಿಣಾಮಕಾರಿ ಬೌಲಿಂಗ್‌ನಿಂದಾಗಿ ಭಾರತ ತಂಡ ಭರ್ಜರಿ ಗೆಲುವು ದಾಖಲಿಸಿತ್ತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>